153 ಸೀ 6 ನಿ-330 = (76) 4/KK 28052

**ಮಾನ್ಯ ವಿಧಾನ ಪರಿಷತ್ತಿನ ಸದ್ಯಸರಾದ ಶ್ರೀಮತಿ ಹೇಮಲತಾ ನಾಯಕ್ ಇವರು ನಿಯಮ 330ರಡಿ ಮಂಡಿಸಿರುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

**ವಿಷಯ:** "ಅಂಗನವಾಡಿ ಕೇಂದ್ರಗಳಲ್ಲಿ ಸಣ್ಣ ಮಕ್ಕಳಿಗೆ ಪೌಷ್ಟಿಕ ಆಹಾರ ಯೋಜನೆಯಡಿ ಕಳಪೆ ಗುಣಮಟ್ಟ ಆಹಾರವನ್ನು ಪೂರೈಸುತ್ತಿದ್ದು, ಇದರಿಂದ ಮಕ್ಕಳ ದೈಹಿಕ ಬೆಳವಣಿಗೆ ಮತ್ತು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಆದ ಕಾರಣ ಗುಣಮಟ್ಟದ ಆಹಾರ ನೀಡುವ ನಿಟ್ಟಿನಲ್ಲಿ ಸಮಗ್ರವಾಗಿ ಚರ್ಚಿಸುವ ಕುರಿತು".

**<u>ಉತ್ತರ:</u>**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ಪ್ರಸ್ತುತ ರಾಜ್ಯದಲ್ಲಿ 67590 ಮುಖ್ಯ ಅಂಗನವಾಡಿ ಹಾಗೂ 2329 ಮಿನಿ ಅಂಗನವಾಡಿ ಕೇಂದ್ರಗಳನ್ನೊಳಗೊಂಡಂತೆ ಒಟ್ಟು 69919 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಪೂರಕ ಪೌಷ್ಟಿಕ ಆಹಾರ ಯೋಜನೆಯಡಿ ಅಕ್ಕಿ, ಗೋಧಿಯನ್ನು ಕೇಂದ್ರ ಸರ್ಕಾರದ Wheat Based Nutrition Program (WBNP) ಯೋಜನೆಯಡಿ Food Corporation of India (FCI) ಮೂಲಕ, ಹಾಲಿನ ಪುಡಿಯನ್ನು ಕೆ.ಎಂ.ಎಫ್. ಮೂಲಕ ಖರೀದಿಸಲಾಗುತ್ತಿದೆ. ಕೋಳಿಮೊಟ್ಟೆಗಳನ್ನು ಅಂಗನವಾಡಿ ಕಾರ್ಯಕರ್ತೆಯರಿಂದ ಸ್ಥಳೀಯವಾಗಿ ಖರೀದಿ ಮಾಡಲಾಗುತ್ತಿದೆ.

ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ: 27-05-2022 ರ ಆದೇಶದ ಅನುಷ್ಠಾನದ ಹಿನ್ನೆಲೆಯಲ್ಲಿ ಪೂರಕ ಪೌಷ್ಟಿಕ ಆಹಾರದ ಗುಣಮಟ್ಟವನ್ನು ಹೆಚ್ಚಿಸಲು Defence Food Research Laboratories (DFRL), ಮೈಸೂರು ಇವರು ಅನುಮೋದಿಸಿರುವ ಸೂತ್ರ ಮತ್ತು ನಿರ್ದಿಷ್ಟತೆಯಂತೆ ಹಾಗೂ ಕೇಂದ್ರ ಸರ್ಕಾರದ ಸಕ್ಷಮ್ ಅಂಗನವಾಡಿ ಮತ್ತು ಪೋಷಣ್ 2.0 ಮಾರ್ಗಸೂಚಿಗಳನ್ವಯ ನಿಗದಿಪಡಿಸಿದ ಕ್ಯಾಲೋರಿಸ್, ಪ್ರೊಟೀನ್ ಹಾಗೂ ಮೈಕ್ರೋ ನ್ಯೂಟ್ರಿಯೆಂಟ್ಸ್ ಒಳಗೊಂಡಂತೆ ಪೂರಕ ಪೌಷ್ಟಿಕ ಆಹಾರದ ಮೆನುವನ್ನು ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ಒದಗಿಸಲಾಗುತ್ತಿದೆ.

ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ವಿತರಿಸುವ ಆಹಾರ ಪದಾರ್ಥಗಳ ವಿತರಣೆಗೆ ಮುನ್ನ NABL (National Accreditation Board for Testing and Calibration Laboratories) ನಲ್ಲಿ ನೋಂದಾಯಿತವಾದ ಪ್ರಯೋಗಾಲಯಗಳ ಮೂಲಕ ಆಹಾರದಲ್ಲಿನ ಪೌಷ್ಟಿಕಾಂಶಗಳ ಗುಣಮಟ್ಟ ಮತ್ತು ನಿಯತಾಂಕಗಳನ್ನು ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಿ BIS ಗುಣಮಟ್ಟದ ಪ್ರಮಾಣ ಪತ್ರ ಹೊಂದಿದ ಮಹಿಳಾ ಗುಂಪುಗಳಿಂದ ತಾಂತ್ರಿಕ ಸಲಹೆಯನ್ನು ಪಡೆದು ಉತ್ತಮ ಗುಣಮಟ್ಟದ ಪೂರಕ ಪೌಷ್ಟಿಕ ಆಹಾರವನ್ನು ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ. ಪೂರಕ ಪೌಷ್ಟಿಕ ಆಹಾರದ ಬಗ್ಗೆ ದೂರುಗಳು ಬಂದಲ್ಲಿ ತುರ್ತಾಗಿ ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳಲಾಗುತ್ತಿದೆ.

.......2

ಕಳೆದ 02 ವರ್ಷಗಳ ಅಪೌಷ್ಟಿಕ ಮಕ್ಕಳ ಮಾಹಿತಿ ಹಾಗೂ ಕುಂಠಿತ ಬೆಳವಣಿಗೆ (Stunting) ಮಕ್ಕಳ ಮಾಹಿತಿಯು ಕೆಳಕಂಡಂತಿದೆ.:

| ಕ್ರ. ಸಂ | ವರ್ಷ | ತೀವ್ರ ಅಪೌಷ್ಟಿಕ ಮಕ್ಕಳ ಸಂಖ್ಯೆ(SAM) | ಸಾಧಾರಣ ಮಕ್ಕಳ ಸಂಖ್ಯೆ (MAM) | ಕುಂಠಿತ ಬೆಳವಣಿಗೆ ಮಕ್ಕಳ ಸಂಖ್ಯೆ(Stunting) |
|---|---|---|---|---|
| 01 | 2023-24 (ಜೂನ್-2023) | 81597 | 150548 | 623768 |
| 02 | 2024-25(ಜೂನ್ -2024) | 9802 | 107779 | 517691 |

2023-24 ನೇ ಸಾಲಿನ ಅಪೌಷ್ಟಿಕ ಮಕ್ಕಳ ಸಂಖ್ಯೆಯನ್ನು 2024-25 ನೇ ಸಾಲಿನ ಅಪೌಷ್ಟಿಕ ಮಕ್ಕಳ ಸಂಖ್ಯೆಯೊಂದಿಗೆ ತಾಳೆ ಮಾಡಿದಾಗ ಅಪೌಷ್ಟಿಕ ಮಕ್ಕಳ ಸಂಖ್ಯೆಯಲ್ಲಿ ಶೇಕಡ 4.17 ಇಳಿಕೆಯಾಗಿರುತ್ತದೆ.

2023-24ನೇ ಸಾಲಿನ ಕುಂಠಿತ ಬೆಳವಣಿಗೆ ಮಕ್ಕಳ ಸಂಖ್ಯೆಯನ್ನು 2024-25 ನೇ ಸಾಲಿನ ಕುಂಠಿತ ಬೆಳವಣಿಗೆ ಮಕ್ಕಳ ಸಂಖ್ಯೆಗೆ ತಾಳೆ ಮಾಡಿದಾಗ ಅಪೌಷ್ಟಿಕ ಮಕ್ಕಳ ಸಂಖ್ಯೆಯಲ್ಲಿ ಶೇಕಡ 4.53 ಇಳಿಕೆಯಾಗಿರುವುದು ಕಂಡುಬಂದಿರುತ್ತದೆ.

**ಸಂಖ್ಯೆ: ಮಮಇ 186 ಐಸಿಡಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.